7. ಸರ್ಕಾರಿ ಉಪಕರಣಾಗಾರ & ತರಬೇತಿ ಕೇಂದ್ರದ ಮುಖಾಂತರ ತರಬೇತಿ ಕಾರ್ಯಕ್ರಮ	265.2935	265.2935
8. ಆಡಳಿತ ವೆಚ್ಚ	67.821	67.821
ಒಟ್ಟು	2260.90	2110.90

1. ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಫ್ಯಾಷನ್ ಟೆಕ್ನಾಲಜಿ ಸಂಸ್ಥೆಗೆ ಅಭ್ಯರ್ಥಿಗಳನ್ನು ನಿಯೋಜಿಸಿದ್ದು ಹಾಜರಾತಿ ನೋಡಿಕೊಂಡು ಹಣ ಪಾವತಿಸಲಾಗುವುದು.

2. ದೌರ್ಜನ್ಯದಲ್ಲಿ ನೊಂದ ಸಂತ್ರಸ್ತರಿಗೆ ಪ್ರಕರಣಗಳಿಗೆ ಸಂಬಂಧಿಸಿದಂತೆ ರೂ. 19.00 ಲಕ್ಷಗಳ ಪ್ರಸ್ತಾವನೆ ಮಂಜೂರು ಮಾಡಲು ಕ್ರಮವಹಿಸಿದೆ.

ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

1101 (1264) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ).– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.–

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯ, ಅತ್ಯಾಧುನಿಕ ಉಪಕರಣಗಳು ಇತ್ಯಾದಿಗಳಿಗೆ 2005–06 ಹಾಗೂ 2006–07ರಲ್ಲಿ ಖರ್ಚು ಮಾಡಿದ ಹಣವೆಷ್ಟು ;

ಆ) ಈ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಇತರ ಸಿಬ್ಬಂದಿಗಳ ಕೊರತೆ ಇದೆಯೇ ;

ಇ) ಇದ್ದಲ್ಲಿ ಈ ಖಾಲಿ ಇರತಕ್ಕಂಥ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ;

ಈ) 2007–08ರಲ್ಲಿ ಮೇಲ್ಕಂಡ ಆಸ್ಪತ್ರೆಗೆ ಒದಗಿಸಲಿರುವ ಸೌಲಭ್ಯಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).–

ಅ) ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಕ್ಕಾಗಿ 2005–06 ರಲ್ಲಿ ರೂ. 46,72,125/– ಹಾಗೂ 2006–07 ರಲ್ಲಿ ರೂ. 15,97,936/– ಹಣವನ್ನು ಖರ್ಚು ಮಾಡಲಾಗಿದೆ. ಅತ್ಯಾಧುನಿಕ ಉಪಕರಣಗಳಿಗಾಗಿ 2005–06 ರಲ್ಲಿ ರೂ. 92,10,538/– ಹಾಗೂ 2006–07 ರಲ್ಲಿ ರೂ. 1,46,640/– ಹಣವನ್ನು ಖರ್ಚು ಮಾಡಲಾಗಿದೆ.

ಆ) ಬಂದಿದೆ.

ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ 27 ವೈದ್ಯರ ಹುದ್ದೆ ಮಂಜೂರಾಗಿದ್ದು 18 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 9 ವೈದ್ಯರ ಹುದ್ದೆ ಖಾಲಿ ಇರುತ್ತವೆ. ಇತರೆ ಸಿಬ್ಬಂದಿಗಳು 291 ಹುದ್ದೆ ಮಂಜೂರಾಗಿದ್ದು, 230 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 61 ಸಿಬ್ಬಂದಿಗಳ ಹುದ್ದೆ ಖಾಲಿ ಇದೆ.

ಇ) ವಿಶೇಷ ನೇರ ನೇಮಕಾತಿ ಮುಖಾಂತರ 500 ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರದ ಅನುಮತಿ ದೊರೆತಿದ್ದು, ಮೊದಲನೇ ಹಂತದಲ್ಲಿ 250 ವೈದ್ಯಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. 2ನೇ ಹಂತದಲ್ಲಿ 250 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸಂದರ್ಶನಗಳನ್ನು ನಡೆಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ. ಹಾಗೂ ವಿಶೇಷ ನೇರ ನೇಮಕಾತಿ ಮುಖಾಂತರ 2807 ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

ಈ) 2007-08ರಲ್ಲಿ ಮೇಲ್ಕಂಡ ಆಸ್ಪತ್ರೆಗೆ ಈ ಕೆಳಕಂಡಂತೆ ಸೌಲಭ್ಯಗಳನ್ನು ಕೈಗೆತ್ತಿಕೊಳ್ಳಲು ಪ್ರಸ್ತಾವನೆ ಇರುತ್ತದೆ.

ಧರ್ಮಶಾಲಾ	– ರೂ. 30 ಲಕ್ಷ
ಲಾಂಡ್ರಿ	– ರೂ. 25 ಲಕ್ಷ
ಎಫ್ಲುಯೆಂಟ್ ಟ್ರೀಟ್‌ಮೆಂಟ್ ಪ್ಲಾಂಟ್ ಮತ್ತು ಸಣ್ಣ ಪುಟ್ಟ ದುರಸ್ತಿ	–ರೂ. 25 ಲಕ್ಷ

ವಿದ್ಯಾರ್ಥಿವೇತನ ನೀಡುವಲ್ಲಿ ವಿಳಂಬ

1103 (1502) ಶ್ರೀ ಬಾಲರಾಜ್ ಎಸ್. (ಕೊಳ್ಳೇಗಾಲ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಮಾಜ ಕಲ್ಯಾಣ ಇಲಾಖೆಯಿಂದ ಉನ್ನತ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ವೈದ್ಯಕೀಯ/ಇಂಜಿನಿಯರಿಂಗ್/ಸ್ನಾತಕೋತ್ತರ ಪದವಿ) ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;